(2) ಕರ್ನಾಟಕ ರಾಜ್ಯ ಅಲ್ಪ ಸಂಖ್ಯಾತರ ಆಯೋಗ (ತಿದ್ದುಪಡಿ) ವಿಧೇಯಕ, 2011

ಶ್ರೀ ಮುಮ್ತಾಜ್ ಅಲಿ ಖಾನ್ (ಹಜ್, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು): ಮಾನ್ಯ ಅಧ್ಯಕ್ಷರೆ, 2011ನೇ ಸಾಲಿನ ಕರ್ನಾಟಕ ರಾಜ್ಯ ಅಲ್ಪ ಸಂಖ್ಯಾತರ ಆಯೋಗ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವನೆ ಮಂಡಿಸಲಾಯಿತು.

ಈಗ ಪ್ರಸ್ತಾವನೆಯನ್ನು ಸಭೆಯ ಮತಕ್ಕೆ ಹಾಕುತ್ತೇನೆ.

ಪ್ರಸ್ತಾವನೆ ಹೀಗಿದೆ:

2011ನೇ ಸಾಲಿನ ಕರ್ನಾಟಕ ರಾಜ್ಯ ಅಲ್ಪ ಸಂಖ್ಯಾತರ ಆಯೋಗ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಸಭೆಯು ಅನುಮತಿ ನೀಡಬೇಕು.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು ಅಂಗೀಕೃತವಾಗಿದೆ.

ಮಾನ್ಯ ಸಚಿವರು ಈಗ ದಯವಿಟ್ಟು ವಿಧೇಯಕವನ್ನು ಮಂಡಿಸಬೇಕು.

ಶ್ರೀ ಮುಮ್ತಾಜ್ ಅಲಿ ಖಾನ್ (ಹಜ್, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು): ಮಾನ್ಯ ಅಧ್ಯಕ್ಷರೆ, 2011ನೇ ಸಾಲಿನ ಕರ್ನಾಟಕ ರಾಜ್ಯ ಅಲ್ಪ ಸಂಖ್ಯಾತರ ಆಯೋಗ (ತಿದ್ದುಪಡಿ) ವಿಧೇಯಕವನ್ನು ಮಂಡಿಸುತ್ತೇನೆ.

ಅಧ್ಯಕ್ಷರು: ವಿಧೇಯಕವನ್ನು ಮಂಡಿಸಲಾಗಿದೆ.

2. ವಿತ್ತೀಯ ಕಾರ್ಯಕಲಾಪಗಳು

2011–12ನೇ ಸಾಲಿನ ಈ ಕೆಳಕಂಡ ಅನುದಾನ ಬೇಡಿಕೆಗಳ ಮಂಡನೆ ಮತ್ತು ಚರ್ಚೆ:

ಅಭಿಯಾಚನೆ ಕ್ರಮಾಂಕ 01 – ಕೃಷಿ ಮತ್ತು ತೋಟಗಾರಿಕೆ

ಶ್ರೀ ಉಮೇಶ್ ವಿಶ್ವನಾಥ ಕತ್ತಿ (ಕೃಷಿ ಸಚಿವರು): ಮಾನ್ಯ ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31.03.2012ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಕೃಷಿ ಮತ್ತು ತೋಟಗಾರಿಕೆ" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 3,07,417.96 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 10,500.00 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಈ ಬೇಡಿಕೆಯನ್ನು ಮಂಡಿಸುತ್ತೇನೆ.

ಅಧ್ಯಕ್ಷರು: ಮಂಡಿಸಲಾಯಿತು.

ಅಭಿಯಾಚನೆ ಕ್ರಮಾಂಕ 02–ಪಶು ಸಂಗೋಪನೆ ಮತ್ತು ಮೀನುಗಾರಿಕೆ

ಶ್ರೀ ಸುರೇಶ್ ಕುಮಾರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) (ಪಶುಸಂಗೋಪನೆ ಮತ್ತು ಮೀನುಗಾರಿಕೆ ಸಚಿವರ ಪರವಾಗಿ): ಮಾನ್ಯ ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31.03.2012ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಪಶುಸಂಗೋಪನೆ ಮತ್ತು ಮೀನುಗಾರಿಕೆ" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 1,00,831.64 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 10,355.00 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಈ ಬೇಡಿಕೆಯನ್ನು ಮಂಡಿಸುತ್ತೇನೆ.

ಅಧ್ಯಕ್ಷರು: ಮಂಡಿಸಲಾಯಿತು.

ಅಭಿಯಾಚನೆ ಕ್ರಮಾಂಕ 07 – ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್

ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು): ಮಾನ್ಯ ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31.03.2012ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 2,57,693,97 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 1,91,050.00 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ

ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಈ ಬೇಡಿಕೆಯನ್ನು ಮಂಡಿಸುತ್ತೇನೆ.

ಅಧ್ಯಕ್ಷರು: ಮಂಡಿಸಲಾಯಿತು.

ಅಭಿಯಾಚನೆ ಕ್ರಮಾಂಕ 13 – ಆಹಾರ ಮತ್ತು ನಾಗರೀಕ ಸರಬರಾಜು

ಕುಮಾರಿ ಶೋಭಾ ಕರಂದ್ಲಾಜೆ (ಇಂಧನ ಮತ್ತು ಆಹಾರ ಹಾಗೂ ನಾಗರೀಕ ಸರಬರಾಜು ಸಚಿವರು): ಮಾನ್ಯ ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31.03.2012ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಆಹಾರ ಮತ್ತು ನಾಗರೀಕ ಸರಬರಾಜು" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 93,436.95 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಈ ಬೇಡಿಕೆಯನ್ನು ಮಂಡಿಸುತ್ತೇನೆ.

ಅಧ್ಯಕ್ಷರು: ಮಂಡಿಸಲಾಯಿತು.

ಅಭಿಯಾಚನೆ ಕ್ರಮಾಂಕ 09 – ಸಹಕಾರ

ಶ್ರೀ ಸುರೇಶ್ ಕುಮಾರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) (ಸಹಕಾರ ಸಚಿವರ ಪರವಾಗಿ): ಮಾನ್ಯ ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31.03.2012ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಸಹಕಾರ" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 52,477.68 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 4,312.71 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಈ ಬೇಡಿಕೆಯನ್ನು ಮಂಡಿಸುತ್ತೇನೆ.

ಅಧ್ಯಕ್ಷರು: ಮಂಡಿಸಲಾಯಿತು.

ಅಧ್ಯಕ್ಷರು: ಈಗ ಮಂಡಿಸಿರುವ ಬೇಡಿಕೆಗಳ ಬಗ್ಗೆ ಚರ್ಚೆ ಮಾಡಿ.

ಶ್ರೀ ಸಿ.ಟಿ.ರವಿ. (ಚಿಕ್ಕಮಗಳೂರು): ಮಾನ್ಯ ಅಧ್ಯಕ್ಷರೆ, ಈ ಒಂದು ವಿಶೇಷವಾದಂತಹ ಸಂದರ್ಭದಲ್ಲಿ ನಾವೆಲ್ಲರೂ ಇಲ್ಲಿ ಸೇರಿದ್ದೇವೆ. ಈ ಸಂದರ್ಭದಲ್ಲಿ ವಿಪಕ್ಷದ ನಾಯಕರುಗಳು ಹಾಗೂ ಶಾಸಕರುಗಳು ಇದ್ದಿದ್ದರೆ ಚೆನ್ನಾಗಿರುತ್ತಿತ್ತು. ಆದರೆ, ಮೊಸರಲ್ಲೇ ಕಲ್ಲು ಹುಡುಕುವಂತಹ ಜಾಯಮಾನಕ್ಕೆ